ವಿಜಯಪುರ | ಸಂಪುಟ 01 | ಸಂಚಿಕೆ 307 | ಪುಟ 4 | ₹ 3.00
https://udayarashminews.com
udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಫೆಬ್ರವರಿ 02, 2024

"ಮಂಡನೆಯಾಗಿರುವ ಕೇಂದ್ರ ಬಜೆಟ್ ನಲ್ಲಿ ಹೊಸತನವನ್ನು ನಿರೀಕ್ಷಿಸಿದ್ದ ಭಾರತೀಯ–ರಿಗೆ ನಿರಾಸೆಯಾಗಿದೆ. ಲೋಕಸಭಾ ಚುನಾವಣೆಯನ್ನು ದೃಷ್ಟಿಯಲ್ಲಿ ಇಟ್ಟುಕೊಂಡು ಮಾಡಿರುವ ಚುನಾವಣೆ ಬಿತ್ತಿ ಪತ್ರದಂತೆ ಈ ಬಜೆಟ್ ಭಾಸವಾಗುತ್ತಿದೆ."




– ಸಂಗಮೇಶ ಬಬಲೇಶ್ವರ
ಮುಖ್ಯ ವಕ್ತಾರರು, ಕೆಪಿಸಿಸಿ ಪ್ರಚಾರ ಸಮಿತಿ

### ಸಂಸದ ಡಿಕೆ ಸುರೇಶ್ ನೀಡಿದ ಹೇಳಿಕೆ । ಬಿಜೆಪಿ ನಾಯಕರ ಖಂಡನೆ । ತಮ್ಮನ ಅಭಿಪ್ರಾಯ ಒಪ್ಪದ ಡಿಕೆಶಿ

# ಪ್ರತ್ಯೇಕ ರಾಷ್ಟ್ರ ಹೇಳಿಕೆಗೆ ಬಿಜೆಪಿ ನಾಯಕರ ಕಿಡಿ

ದೆಹಲಿ: ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಬಜೆಟ್ ಮಂಡಿಸಿದ ಬೆನ್ನಲ್ಲೇ, ದಕ್ಷಿಣ ಭಾರತದ ರಾಜ್ಯಗಳಿಗೆ ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡುತ್ತಿಲ್ಲ ಎಂದು ಆರೋಪಿಸಿರುವ ಬೆಂಗಳೂರು ಗ್ರಾಮಾಂತರ ಲೋಕಸಭಾ ಸಂಸದ ಡಿ.ಕೆ.ಸುರೇಶ್, ಇದೇ ರೀತಿ ಮುಂದುವರಿದರೆ ಪ್ರತ್ಯೇಕ ದೇಶದ ಬೇಡಿಕೆ ಮುಂದಿಡುವುದಾಗಿ ಬೆದರಿಕೆ ಹಾಕಿದ್ದಾರೆ.

ದೆಹಲಿಯಲ್ಲಿ ಸಂಸತ್ತಿನ ಹೊರಗೆ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ ಬಜೆಟ್ ಅನ್ನು ಟೀಕಿಸುವ ಸಂದರ್ಭದಲ್ಲಿ ಸುರೇಶ್ ಈ ಹೇಳಿಕೆ ನೀಡಿದ್ದಾರೆ. ಇದು ಸಕತ್ ಕಿಡಿ ಹಬ್ಬಿಸಿದ್ದು, ಬಿಜೆಪಿ ನಾಯಕರು ಟೀಕೆ ವ್ಯಕ್ತಪಡಿಸುತ್ತಿದ್ದಾರೆ.






ಎಂಪಿ ರೇಣುಕಾಚಾರ್ಯ, ಆರ್. ಅಶೋಕ್, ಸುನೀಲ್ ಕುಮಾರ್ ಅವರಂತಹ ನಾಯಕರು ಭಾರಿ ಖಂಡನೆ ವ್ಯಕ್ತಪಡಿಸಿದ್ದಾರೆ.

"ಅಖಂಡ ಭಾರತವನ್ನು ತುಂಡು ಮಾಡಿದ ಕಾಂಗ್ರೆಸ್ಸಿಗರ ಮನಸ್ಥಿತಿ ಇಂದು ಯಾವ ಮಟ್ಟಕ್ಕೆ ತಲುಪಿದೆ ಎಂದರೆ, ದೇಶವನ್ನು ಮತ್ತೊಮ್ಮೆ ವಿಭಜಿಸುವ ಬಹುದೊಡ್ಡ ಷಡ್ಯಂತ್ರ ಸಂಸದ ಡಿ. ಕೆ. ಸುರೇಶ್ ಅವರ ಬಾಯಲ್ಲಿ ಬಂದಿದೆ!. ದೇಶವನ್ನೇ ತುಂಡು ಮಾಡುವ ಮತಾಂಧ ಜಿಹಾದಿಗಳನ್ನು ಬಳಸಿಕೊಂಡು ಅವರನ್ನು ಪೋಷಣೆ ಮಾಡುತ್ತಿರುವ ಕಾಂಗ್ರೆಸ್, ಇಂದು ಜಿಹಾದಿಗಳ ತಾಳಕ್ಕೆ ತಕ್ಕಂತೆ ಕುಣಿಯುತ್ತಿದೆ.

ಧರ್ಮದ ಆಧಾರದ ಮೇಲೆ ಭಾರತವನ್ನು ಒಡೆದಾದ ಮೇಲೂ ಕಾಂಗ್ರೆಸ್‌ಗೆ, ದೇಶವನ್ನು ಛಿದ್ರ ಮಾಡುವ ಮಹದಾಸೆ ಈಡೇರದೆ ಇರುವುದೇ ಇಂತಹ ಮತಿಗೇಡಿ ಹೇಳಿಕೆಗಳು ಹೊರ ಬರಲು ಕಾರಣ!" ಎಂದು ಕರ್ನಾಟಕ ಬಿಜೆಪಿ ಖಂಡಿಸಿದೆ.

### ಡಿ.ಕೆ. ಸುರೇಶ್ ಹೇಳಿದ್ದು



ದೆಹಲಿಯಲ್ಲಿ ಕೇಂದ್ರ ಬಜೆಟ್ ಬಗ್ಗೆ ಪ್ರತಿಕ್ರಿಯೆ ನೀಡಿದ್ದ ಸಂಸದ ಡಿ.ಕೆ. ಸುರೇಶ್ ಅವರು, ಇಂದಿನ ಬಜೆಟ್‌ನಲ್ಲಿ ಹೊಸತನ ಇಲ್ಲ. ದಕ್ಷಿಣ ಭಾರತದ ರಾಜ್ಯಗಳಿಗೆ ಅನ್ಯಾಯ ಆಗ್ತಿದೆ. ಹೀಗೆ ಅನ್ಯಾಯ ಆದ್ರೆ ಪ್ರತ್ಯೇಕ ರಾಷ್ಟ್ರ ಕೇಳಬೇಕಾಗುತ್ತದೆ ಎಂದಿದ್ದರು ಸಂಸದ ಡಿಕೆ ಸುರೇಶ್.

ಕೇಂದ್ರ ಸರ್ಕಾರದ ವಿರುದ್ಧ ಈ ಮೂಲಕ ಅವರು ತೀವ್ರ ಆಕ್ರೋಶ ಹೊರಹಾಕಿದ್ದರು.

### ಡಿ.ಕೆ.ಶಿವಕುಮಾರ್ ಸ್ಪಷ್ಟನೆ




ನಮ್ಮದು ಅಖಂಡ ಭಾರತ, ನಾನು ಪ್ರತ್ಯೇಕ ದೇಶ ಬೇಡಿಕೆ ಒಪ್ಪುವುದಿಲ್ಲ. ನಮ್ಮದು ಅಖಂಡ ಭಾರತ. ಹೀಗಾಗಿ ಅಖಂಡ ಭಾರತ ಇರಬೇಕು. ಆದರೆ ಡಿ.ಕೆ. ಸುರೇಶ್ ಅವರು ಹೇಳಿರುವುದು ಆ ಅರ್ಥದಲ್ಲಿ ಅಲ್ಲ ಎಂದು ತಮ್ಮ ಸಹೋದರನ ಹೇಳಿಕೆ ಬಗ್ಗೆ ಡಿ.ಕೆ.ಶಿವಕುಮಾರ್ ಅವರು ಸ್ಪಷ್ಟನೆ ನೀಡಿದ್ದಾರೆ.

### ರಾಜ ನುಡಿ

ಒಂದು ಉತ್ತಮ ಪುಸ್ತಕದಲ್ಲಿ ಉತ್ತಮವಾದದ್ದು, ಅಲ್ಲಿರುವ ಸಾಲುಗಳಲ್ಲಿ ಇರುವುದಿಲ್ಲ, ಅಲ್ಲಿರುವ ಸಾಲುಗಳ ನಡುವಿನ ಅರ್ಥದಲ್ಲಿ ಅಡಗಿರುತ್ತದೆ. ಹಾಗೆಯೇ ಸುಂದರ ಬದುಕು ವ್ಯಕ್ತಿಗಳಲ್ಲಿ ಖಂಡಿತ ಇರುವುದಿಲ್ಲ. ವ್ಯಕ್ತಿಗಳ ನಡುವಿನ ಬಾಂಧವ್ಯದಲ್ಲಿರುತ್ತದೆ. ಇವೆರಡೂ ಸತ್ಯ ಅರಿತವ–ರಿಗೆ, ಪುಸ್ತಕ ಮತ್ತು ಬದುಕು ಅರ್ಥವಾಡಿಕೊಳ್ಳಲು ಕಠಿಣವೆನಿಸಲಾರವು.

–ಡಾ. ರಾಜಶೇಖರ ನಾಗೂರ



### ವಚನ ಚಿಂತನ 291

*ತನ್ನ ತಾನರಿದು ತಾನಾದಡೆ ಲಿಂಗ ತಾನೆ ಬೇರಿಲ್ಲ*

*ಆಕಾರವಿಲ್ಲದ ನಿರಾಕಾರ ಲಿಂಗವ*
*ಕೈಯಲ್ಲಿ ಹಿಡಿದು ಕಟ್ಟಿದೆವೆಂಬರು ಅಜ್ಞಾನಿ ಜೀವಿಗಳು.*
*ಹರಿಬ್ರಹ್ಮರು ವೇದ ಪುರಾಣ ಆಗಮಂಗಳು ಅರಸಿ ಕಾಣದ ಲಿಂಗ.*
*ಭಕ್ತಿಗೆ ಫಲವಲ್ಲದೆ ಲಿಂಗವಿಲ್ಲ.*
*ಕರ್ಮಕ್ಕೆ ನರಕವಲ್ಲದೆ ಲಿಂಗವಿಲ್ಲ.*
*ಜ್ಞಾನಕ್ಕೆ ಪರಿಭ್ರಮಣವಲ್ಲದೆ ಲಿಂಗವಿಲ್ಲ.*
*ವೈರಾಗ್ಯಕ್ಕೆ ಮುಕ್ತಿಯಲ್ಲದೆ ಲಿಂಗವಿಲ್ಲ.*
*ಇದು ಕಾರಣ ತನ್ನ ತಾನರಿದು ತಾನಾದಡೆ ಚೆನ್ನಮಲ್ಲಿಕಾರ್ಜುನ ತಾನೆ ಬೇರಿಲ್ಲ.*
*– ಅಕ್ಕಮಹಾದೇವಿಯವರು*

ಆಕಾರ ಸ್ವರೂಪ ಇಷ್ಟಲಿಂಗವನ್ನೇ ಲಿಂಗವೆಂದು ಭಾವಿಸಿರುವವರನ್ನು ಗುರಿಯಾಗಿಸಿ ಅಕ್ಕಮಹಾದೇವಿಯವರು ಈ ವಚನದಲ್ಲಿ ಅದಕ್ಕೆ ಸ್ಪಷ್ಟೀಕರಣ ನೀಡಿದ್ದಾರೆ, ಲಿಂಗವೆಂದರೆ ನಿರಾಕಾರ ಪರಮ ಚೈತನ್ಯ ಅದನ್ನು ಅಂಗದೇಹಿಗಳು ಬಾಹ್ಯದಲ್ಲಿ ಹಿಡಿದಿಡಲು ಸಾಧ್ಯವಿಲ್ಲ, ಹಿಂದಿನಿಂದಲೂ (ಹರಿಬ್ರಹ್ಮರು ವೇದ ಪುರಾಣ ಆಗಮಂಗಳ ಕಾಲದಿಂದಲೂ) ಇದರ ಮೇಲೆ ಹಿಡಿತ ಸಾಧಿಸಲು ಪ್ರಯತ್ನಿಸಿ ವಿಫಲವಾಗಿರುವುದನ್ನು ಉಲ್ಲೇಖಿಸುತ್ತ, ಇದಕ್ಕಾಗಿ ಮಾಡಿದ ಭಕ್ತಿ, ಕರ್ಮ, ಜ್ಞಾನ ಮತ್ತು ವೈರಾಗ್ಯಗಳು ಕ್ರಮವಾಗಿ ಫಲ, ನರಕ, ಪರಿಭ್ರಮಣ ಮತ್ತು ಮುಕ್ತಿಯನ್ನು ನೀಡಿವೇ ವಿನಃ ಲಿಂಗದ ನಿಜರೂಪ ಅರಿಯುವಲ್ಲಿ ವಿಫಲರಾಗಿರುವೆ. ಕಾರಣವೇನೆಂದರೆ ಲಿಂಗ ಬಾಹ್ಯದಲ್ಲಿ ಅರಸುವ ವಸ್ತುವಲ್ಲ ಅದು ಅಂತರಂಗದಲ್ಲಿ ಆವರಿಸಿರುವ ಚೈತನ್ಯ, ತನ್ನ ತಾ ಅರಿಯುವುದೊಂದೆ ಅಂತಿಮ ಮಾರ್ಗವೆಂದಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

### ದಾವಣಗೆರೆ ಸಮ್ಮೇಳನದಲ್ಲಿ ಘಟಕಕ್ಕೆ ಪ್ರಶಸ್ತಿ ಪ್ರದಾನ । ಸಂಭ್ರಮಿಸಿದ ಕಾನಿಪ ಸದಸ್ಯರು

# ವಿಜಯಪುರ ಕಾನಿಪ ಸಂಘಕ್ಕೆ ಕೆಯುಡಬ್ಲ್ಯೂಜೆ ಪ್ರಶಸ್ತಿ!

**ಉದಯರಶ್ಮಿ ನ್ಯೂಸ್**

ವಿಜಯಪುರ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾ ಘಟಕಕ್ಕೆ ರಾಜ್ಯ ಘಟಕ ಕೊಡಮಾಡುವ ಉತ್ತಮ ಸಾಧನೆಗೈದ ಸಂಘ ಪ್ರಶಸ್ತಿಗೆ ಪುರಸ್ಕೃತವಾಗಿದ್ದು, ಸಂಘದ ಸದಸ್ಯರ ಸಂಭ್ರಮಕ್ಕೆ ಪಾರವೇ ಇಲ್ಲದಂತಾಗಿದೆ.

ರಾಜ್ಯದ ಮೂರು ಜಿಲ್ಲಾ ಘಟಕಗಳಿಗೆ ಈ ಪ್ರಶಸ್ತಿ ಲಭಿಸಿದ್ದು, ಅದರಲ್ಲಿ ವಿಜಯಪುರ ಕಾರ್ಯನಿರತ ಪತ್ರಕರ್ತರ ಸಂಘವೂ ಈ ಪ್ರಶಸ್ತಿಗೆ ಪಾತ್ರವಾಗಿದ್ದು, ಸಂಘದ ಸದಸ್ಯರು ಹಾಗೂ ಪದಾಧಿಕಾರಿಗಳ ಹರ್ಷದ ಹೊನಲಿಗೆ ಕಾರಣವಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಟಿ. ಚೂರಿ ಹಾಗೂ ಪ್ರಧಾನ ಕಾರ್ಯದರ್ಶಿ ಮೋಹನ ಕುಲಕರ್ಣಿ ತಿಳಿಸಿದ್ದಾರೆ.

ಕಳೆದ ವರ್ಷ ಫೆ. 4 ಮತ್ತು 5 ರಂದು ವಿಜಯಪುರ ಜಿಲ್ಲಾ ಘಟಕ 37ನೇ ರಾಜ್ಯ ಪತ್ರಕರ್ತರ ಸಮ್ಮೇಳನವನ್ನು ಯಶಸ್ವಿಯಾಗಿ ಸಂಘಟಿಸಿತ್ತು. ಈ ಸಮ್ಮೇಳನ ಯಶಸ್ಸಿಗೆ ಸಂಘದ ಸದಸ್ಯರು ಹಾಗೂ ಹಾಗೂ ಹಿತೈಷಿಗಳು ದಣಿವರಿಯದೇ ದುಡಿದಿದ್ದನ್ನು ಇಲ್ಲಿ ಸ್ಮರಿಸಬಹುದು.




ದಾವಣಗೆರೆಯಲ್ಲಿ ಇದೇ ಫೆ. 3 ಮತ್ತು 4 ರಂದು ನಡೆಯಲಿರುವ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ವಿಜಯಪುರ ಜಿಲ್ಲಾ ಘಟಕಕ್ಕೆ ಕೆಯುಡಬ್ಲ್ಯೂಜೆ ವಾರ್ಷಿಕ ಪ್ರಶಸ್ತಿ ನೀಡಿ ರಾಜ್ಯ ಘಟಕ ಗೌರವಿಸಲಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ತಿಳಿಸಿದ್ದಾರೆ.

ಸದಸ್ಯರ ಸಂಭ್ರಮ : ಜಿಲ್ಲಾ ಸಂಘ ರಾಜ್ಯ ಘಟಕದ ಪ್ರಶಸ್ತಿಗೆ ಪುರಸ್ಕೃತವಾದ ಸುದ್ದಿ ತಿಳಿಯುತ್ತಿದ್ದಂತೆಯೇ ಸಂಘದ ಸದಸ್ಯರು, ಪದಾಕಾರಿಗಳು ಹಾಗೂ ಹಿತೈಷಿಗಳು ಪರಸ್ಪರ ಅಭಿನಂದನೆ ವಿನಿಮಯ ಮಾಡಿಕೊಂಡರು. ಜೊತೆಗೆ ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು.



ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾ ಘಟಕಕ್ಕೆ ಕೆಯುಡಬ್ಲ್ಯೂಜೆ ವಾರ್ಷಿಕ ಪ್ರಶಸ್ತಿ ಲಭಿಸಿದ್ದಕ್ಕೆ ಸಂಘದ ಜಿಲ್ಲಾ ಉಪಾಧ್ಯಕ್ಷ ಹಾಗೂ 'ಉದಯರಶ್ಮಿ' ದಿನಪತ್ರಿಕೆ ಸಂಪಾದಕ ಇಂದುಶೇಖರ ಮಣೂರ ಹರ್ಷ ವ್ಯಕ್ತಪಡಿಸಿದ್ದಾರೆ.

ಕಳೆದ ವರ್ಷ ವಿಜಯಪುರದಲ್ಲಿ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರ ಸಾಂಘಿಕ ಶ್ರಮದಿಂದ 37ನೇ ರಾಜ್ಯ ಪತ್ರಕರ್ತರ ಸಮ್ಮೇಳನ ತುಂಬ ಯಶಸ್ವಿಯಾಗಿತ್ತು. ಸಂಘದ ಕಾರ್ಯಚಟುವಟಿಕೆ ಮತ್ತು ಶ್ರಮವನ್ನು ರಾಜ್ಯ ಘಟಕದ ಕ್ರಿಯಾಶೀಲ ಅಧ್ಯಕ್ಷ ಶಿವಾನಂದ ತಗಡೂರ ಮತ್ತು ಪದಾಧಿಕಾರಿಗಳು ಗುರುತಿಸಿದ್ದು, ನಮಗೆಲ್ಲ ಇನ್ನೂ ಹೆಚ್ಚಿನ ರೀತಿಯ ಸೇವೆಗೈಯಲು ಸ್ಫೂರ್ತಿ ನೀಡಿದೆ ಎಂದು ಇಂದುಶೇಖರ ತಿಳಿಸಿದ್ದಾರೆ.

## ಚುನಾವಣಾ ಬಜೆಟ್ :ಶಾಸಕ ಮನಗೂಳಿ

**ಉದಯರಶ್ಮಿ ನ್ಯೂಸ್**

ಸಿಂದಗಿ: ಕೇಂದ್ರ ಸರ್ಕಾರ ಮಂಡಿಸಿದ ಬಜೆಟ್ ನಿರಾಶದಾಯಕವಾಗಿದೆ. ರೈತರಿಗೆ ಬಡವರಿಗೆ ಮಹಿಳೆಯರಿಗೆ ಮತ್ತು ಯುವಕರಿಗೆ ಹೊಸ ಯೋಜನೆಗಳು ಮತ್ತು ಹೊಸ ಕಾರ್ಯಕ್ರಮಗಳು ಇಲ್ಲದ ಬಜೆಟ್ ಇದಾಗಿದೆ ಎಂದು ಶಾಸಕ ಅಶೋಕ ಮನಗೂಳಿ ಟೀಕಿಸಿದ್ದಾರೆ.

ಇದು ಒಂದು ದೇಶದ ಭರವಸೆಯ ಬಜೆಟ್ ಆಗಬೇಕಾಗಿತ್ತು. ಆದರೆ ಇದು ಚುನಾವಣಾ ಬಜೆಟ್ ಆಗಿರುವುದ–ರಿಂದ ಇದರಲ್ಲಿ ಯಾವುದೇ ರೀತಿಯ ಪರಿಣಾಮಕಾರಿಯಾಗಿರುವ ಹೊಸ ಯೋಜನೆಗಳನ್ನ ಕಾಣುತ್ತಿಲ್ಲ ಎಂದು ಶಾಸಕ ಅಶೋಕ್ ಮನಗೂಳಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.



## ನಿರಾಸೆ ಮೂಡಿಸಿದ ಬಜೆಟ್ :ಬಬಲೇಶ್ವರ

**ಉದಯರಶ್ಮಿ ನ್ಯೂಸ್**

ವಿಜಯಪುರ: ಹೊಸ ಸಂಸತ್ ಭವನದಲ್ಲಿ ಮಂಡನೆಯಾಗಿರುವ ಬಜೆಟ್ ನಲ್ಲಿ ಹೊಸತನವನ್ನು ನಿರೀಕ್ಷಿಸಿದ್ದ ಸಮಸ್ತ ಭಾರತೀಯ–ರಿಗೆ ನಿರಾಸೆಯಾಗಿದೆ ಎಂದು ಕೆಪಿಸಿಸಿ ಪ್ರಚಾರ ಸಮಿತಿ ಮುಖ್ಯ ವಕ್ತಾರ ಸಂಗಮೇಶ ಬಬಲೇಶ್ವರ ಹೇಳಿದರು.

ಈ ಕುರಿತು ಗುರುವಾರ ಪ್ರತಿಕ್ರಿಯಿಸಿದ ಅವರು, ಲೋಕಸಭಾ ಚುನಾವಣೆಯನ್ನು ದೃಷ್ಟಿಯಲ್ಲಿ



ಇಟ್ಟುಕೊಂಡು ಮಾಡಿರುವ ಚುನಾವಣೆ ಬಿತ್ತಿ ಪತ್ರದಂತೆ ಈ ಬಜೆಟ್ ಭಾಸವಾಗುತ್ತಿದೆ. ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ರವರು ಕಿವಿಗೆ ಇಂಪಾದ ಸೊಗಸಾದ ಇಂಗ್ಲಿಷ್ನಲ್ಲಿ ಬಜೆಟ್ಟನ್ನು ಮಂಡಿಸಿದ್ದಾರೆ. ಅದು ಕೇಳಲು ಇಂಪಾಗಿದೆ ಹೊರತು ಜನರ ಬದುಕು ಕಟ್ಟಿಕೊಡುವಲ್ಲಿ ವಿಫಲವಾಗಿರುವುದು ವಿಫಲತೆಯತ್ತಲೇ ಸಾಗಿರುವುದು ದೇಶದ ಜನತೆಯ ದೌರ್ಭಾಗ್ಯ ಎಂದು ಸಂಗಮೇಶ ಬಬಲೇಶ್ವರ ವ್ಯಂಗ್ಯವಾಡಿದ್ದಾರೆ.

## ಸ್ವಾಗತಾರ್ಹ ಮಧ್ಯಂತರ ಬಜೆಟ್ :ಡಾ.ಗೌತಮ್

**ಉದಯರಶ್ಮಿ ನ್ಯೂಸ್**

ವಿಜಯಪುರ: 2047ರ ವೇಳೆಗೆ ನಾವು ಭಾರತವನ್ನು ಅಭಿವೃದ್ಧಿ ಹೊಂದಿದ ದೇಶವನ್ನಾಗಿ ಮಾಡುತ್ತೇವೆ ಎಂದು ಕೇಂದ್ರ ಸರ್ಕಾರದ ಮಧ್ಯಂತರ ಬಜೆಟ್ ನಲ್ಲಿ

ಸಚಿವೆ ನಿರ್ಮಲಾ ಸೀತಾರಾಮನ್ ಘೋಷಿಸಿರುವುದು ಸ್ವಾಗತಾರ್ಹ ಎಂದು ಬಿಜೆಪಿ ಮುಖಂಡ ಡಾ.ಗೌತಮ್.ಆರ್.ಚೌಧರಿ ಹೇಳಿದ್ದಾರೆ.

ಕಳೆದ 10 ವರ್ಷಗಳಲ್ಲಿ ದೇಶದ 25 ಕೋಟಿ ಜನರು ಬಡತನದಿಂದ



ಹೊರಬಂದಿದ್ದಾರೆ. ಮಹಿಳೆಯರಿಗೆ, ರೈತರಿಗೆ, ಪ್ರವಾಸೋದ್ಯಮಕ್ಕೆ, ರೈಲು ಅಭಿವೃದ್ಧಿಗೆ ಹಾಗೂ ಎಂಎಸ್–ಎಂಇ ಉದ್ಯಮಗಳಿಗೆ, ಪರಿಸರಕ್ಕೆ ಸರ್ಕಾರ ಆದ್ಯತೆ ಕೊಟ್ಟಿರುವುದು ಇಡೀ ದೇಶದ ಜನರು ಖುಷಿ ಪಡುವ ವಿಚಾರ. ಜಾಗತಿಕ ಮಟ್ಟದಲ್ಲಿ ಭಾರತದ ಸ್ಥಾನಮಾನ ದೃಷ್ಟಿಕೋನದಲ್ಲಿ ಇಟ್ಟುಕೊಂಡು ಮಂಡಿಸಿರುವ ಈ ಬಜೆಟ್ ಎಲ್ಲ ವರ್ಗದವರಿಗೂ ಅನುಕೂಲಕರವಾಗಿದೆ ಎಂದು ಡಾ.ಗೌತಮ್ ಚೌಧರಿ ಪ್ರತಿಕ್ರಿಯಿಸಿದ್ದಾರೆ.

## ಸರ್ವೇಜನ ಸುಖಿನೋಭವಂತು ಬಜೆಟ್ :ಕಾರಜೋಳ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿದ ಬಜೆಟ್ ಸರ್ವೇ ಜನ ಸುಖಿನೋ ಭವಂತು: ಎಂಬ ಉಕ್ತಿಗೆ ಉದಾಹರಣೆಯಾಗಿದೆ ಎಂದು ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಉಮೇಶ ಕಾರಜೋಳ ಹೇಳಿದ್ದಾರೆ.

ಕೇಂದ್ರ ಬಜೆಟ್ ಕುರಿತು ಪ್ರತಿಕ್ರಿಯೆ ನೀಡಿರುವ ಅವರು, ರೈತ ಕಲ್ಯಾಣ, ಕಾರ್ಮಿಕ ಸಬಲೀಕರಣ, ಮಹಿಳಾ ಸಬಲೀಕರಣ ಹೀಗೆ ಎಲ್ಲರ ಅಭಿವೃದ್ಧಿಗೆ ಪೂರಕವಾದ ಬಜೆಟ್ ಮಂಡನೆಯಾಗಿದೆ. ಜನಪ್ರೀಯತೆಗಿಂತ ಜನಪರಕ್ಕೆ ಆದ್ಯತೆ ದೊರಕಿದೆ.

ಜನಸಾಮಾನ್ಯರಿಗೆ ಯಾವುದೇ ಆದಾಯ ತೆರಿಗೆ ಹೊರೆ ಇಲ್ಲ,

ಆಶಾ ಅಂಗನವಾಡಿ ಕಾರ್ಯಕರ್ತೆಯರಿಗೆ ಆಯುಷ್ಮಾನ ವಿಸ್ತರಣೆ ಮಾಡುವ ನಿರ್ಧಾರ, ಲಕ್ಷಾಧಿಪತಿ ದೀದಿ ಮಹಿಳಾ ಆರ್ಥಿಕ ಸಬಲೀಕರಣಕ್ಕೆ ಒತ್ತು ಹೀಗೆ ಹಲವಾರು ಉತ್ತಮ ಕಾರ್ಯಕ್ರಮಗಳನ್ನು ಹೊಂದಿರುವ ಬಜೆಟ್ ಇದಾಗಿದೆ ಎಂದು ಕಾರಜೋಳ ಹೇಳಿದ್ದಾರೆ.



## ಜನಪರ ಬಜೆಟ್ : ಮಾಜಿ ಶಾಸಕ ಭೂಸನೂರ

**ಉದಯರಶ್ಮಿ ನ್ಯೂಸ್**

ಸಿಂದಗಿ: ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ರಾಷ್ಟ್ರದ ಹಿತಾಸಕ್ತಿಯನ್ನು ಗಮದಲ್ಲಿಟ್ಟುಕೊಂಡು ಜನಪರ ಬಜೆಟ್ ಮಂಡನೆ ಮಾಡಿದ್ದಾರೆ. ಇದು ಅಭಿವೃದ್ಧಿ ಪರವಾದ ಬಜೆಟ್ ಆಗಿದೆ ಎಂದು ಮಾಜಿ ಶಾಸಕ ರಮೇಶ ಭೂಸನೂರ ಬಣ್ಣಿಸಿದ್ದಾರೆ.



# ಮಕ್ಕಳಿಗೆ ಸಂಸ್ಕಾರ ಮೊದಲ ಪಾಠವಾಗಲಿ



**ಉದಯರಶ್ಮಿ ನ್ಯೂಸ್**

ಕೆಂಭಾವಿ: ಪ್ರಸ್ತುತದಲ್ಲಿ ಮಕ್ಕಳಿಗೆ ಶಿಕ್ಷಣದ ಜೊತೆ ಸಂಸ್ಕಾರ ಬಹು ಮುಖ್ಯ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಅಮೀನರೆಡ್ಡಿ ಪಾಟೀಲ ಯಾಳಗಿ ಹೇಳಿದರು.

ಶುಕ್ರವಾರ ಪಟ್ಟಣದ ಹೋಲಿಫೇತ್ ಪಬ್ಲಿಕ್ ಶಾಲೆಯ 20ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು ಪಾಲಕರು ತಮ್ಮ ಮಕ್ಕಳ ಉಜ್ವಲ ಭವಿಷ್ಯದ ಕನಸನ್ನು ಕಟ್ಟಿಕೊಂಡಿರುತ್ತಾರೆ. ಪಾಲಕರ ಕನಸು ನನಸಾಗಲು ಮಕ್ಕಳಿಗೆ ಸಂಸ್ಕಾರ ಮೊದಲ ಪಾಠವಾಗಬೇಕು ಎಂದ ಅವರು ಹೋಲಿಫೇತ್ ಶಿಕ್ಷಣ ಸಂಸ್ಥೆ ಇವತ್ತು ಅದ್ದೂರಿಯಾಗಿ ತನ್ನ ಇಪ್ಪತ್ತನೆ ವರ್ಷಾಚರಣೆ ಮಾಡಿಕೊಳ್ಳುತ್ತಿರುವುದು ಸಂಸ್ಥೆಯ ಸಾಧನೆಯ ಪಥಕ್ಕೆ ಸಾಕ್ಷಿಯಾಗಿದೆ ಎಂದರು.

ಜಿಪಂ ಮಾಜಿ ಅಧ್ಯಕ್ಷ ಸಿದ್ಧನಗೌಡ ಪೊಲೀಸ್ ಪಾಟೀಲ ಮಾತನಾಡಿ, ಪಟ್ಟಣದಲ್ಲಿ ಒಳ್ಳೆಯ ಶಿಕ್ಷಣ ನೀಡುತ್ತಿರುವ ಹೋಲಿಫೇತ್ ಶಾಲೆ ಯಶಸ್ವಿ ಶತ ಸಂವತ್ಸರ ಕಾಣುವಂತಾಗಲಿ ಎಂದು ಶುಭಹಾರೈಸಿದರು.

ಸುಮಿತ್ರಪ್ಪ ಅಂಗಡಿ ಪ್ರಾಸ್ತಾವಿಕ ಮಾತನಾಡಿದರು. ಪವಿತ್ರ ವಡ್ಡೆ ಶಾಲಾ ವರದಿ ವಾಚನ ಮಾಡಿದರು.

ಹಿರೇಮಠದ ಪೀಠಾಧಿಪತಿ ಚನ್ನಬಸವ ಶಿವಾಚಾರ್ಯರು, ಮಳಖೇಡದ ಸೈಯ್ಯದ್ ಶಾ ಮುಸ್ತಾಫಾ ಖಾದ್ರಿ, ಕೂಡಲಗಿ ಬಾಬಾ ಮಠದ ಉಮಾಕಾಂತ ಸಿದ್ಧರಾಜ ಮಹಾರಾಜರು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ನಂತರ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಸಂಸ್ಥೆಯ ಕಾರ್ಯದರ್ಶಿ ನರಸಿಂಹ ವಡ್ಡೆ, ಮುಖ್ಯಾಧಿಕಾರಿ ಮಹ್ಮದ್ ಯುಸೂಫ್, ವೈದ್ಯಾಧಿಕಾರಿ ಡಾ. ಗಿರೀಶ ಕುಲಕರ್ಣಿ, ಪಿಎಸ್ಐ ವೆಂಕಣ್ಣ ಶಹಾಪೂರ, ವಾಮನರಾವ ದೇಶಪಾಂಡೆ, ಅಶೋಕ ಸೊನ್ನದ, ಸಂಜೀವರಾವ ಕುಲಕರ್ಣಿ, ಶಣಬಸ್ಸು ಡಿಗ್ಗಾವಿ, ಬಿ. ವಿ. ರೆಡ್ಡಿ, ಕೆ.ವಿ. ರೆಡ್ಡಿ, ಶಾಮ್ ಶ್ರೀವಾತ್ಸವ, ಕಲ್ಯಾಣರೆಡ್ಡಿ, ಪಿ. ಚಂದ್ರಶೇಖರ ರೆಡ್ಡಿ ಸೇರಿದಂತೆ ಹಲವರಿದ್ದರು.

# ಪಾರಂಪರಿಕ ತಾಣಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಇತಿಹಾಸವನ್ನು ಮರೆತವರು ಎಂದಿಗೂ ಇತಿಹಾಸ ನಿರ್ಮಿಸಲಾರರು ಅದರಂತೆ ಐತಿಹಾಸಿಕ ಪಾರಂಪರಿಕ ತಾಣಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಅದಕ್ಕೆ ಇತಿಹಾಸದ ಅಧ್ಯಯನ ಮಾಡಬೇಕು. ಅದರ ಆಳ-ಅಗಲ ಅರಿವಾಗುತ್ತದೆ ಎಂದು ನಗರದ ಜಿ ಎಫ್ ಜಿ ಸಿ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ.ಬಿ.ಜಿ.ಪತ್ತಾರ ಹೇಳಿದರು.

ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎಸ್ ಬಿ ಕಲಾ ಮತ್ತು ಕೆಸಿಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಐಕ್ಯೂಎಸಿ ಮತ್ತು ಹೆರಿಟೇಜ್ ಕ್ಲಬ್ ಸಂಯೋಜನೆಯಡಿಯಲ್ಲಿ ಐತಿಹಾಸಿಕ ಪಾರಂಪರಿಕ ತಾಣಗಳ ಮಹತ್ವ ಮತ್ತು ಅವುಗಳ ಸಂರಕ್ಷಣೆ ಕುರಿತು ವಿಶೇಷ ಉಪನ್ಯಾಸದಲ್ಲಿ ಮಾತನಾಡಿದ ಅವರು, ದೇಶವು ಅತ್ಯಂತ ಭವ್ಯವದಾದ ಸಂಸ್ಕೃತಿಕ, ಐತಿಹಾಸಿಕ ಪಾರಂಪರಿಕ ನೆಲೆ ಬೀಡಾಗಿದೆ. ಹಲವಾರು ಇತಿಹಾಸದ ಕುರುಹುಗಳನ್ನು ಹೊಂದಿದೆ. ಅದರ ಸಂರಕ್ಷಣೆ ಮಾಡುವ ಜವಾಬ್ದಾರಿ ನಮ್ಮ ಮೇಲಿದೆ. ವಿದ್ಯಾರ್ಥಿಗಳು ಇಂತಹ ಪಾರಂಪರಿಕ ತಾಣಗಳ ಬಗ್ಗೆ ಅಧ್ಯಯನ ಮಾಡಬೇಕು ಎಂದರು.




ಈ ವೇಳೆಯಲ್ಲಿ ಐಕ್ಯುಎಸಿ ಸಂಯೋಜಕ ಡಾ.ಪಿ.ಎಸ್.ಪಾಟೀಲ ಮಾತನಾಡಿ, ವಿದ್ಯಾರ್ಥಿಗಳು ನಿರಂತರ ಅಧ್ಯಯನಶೀಲರಾಗಬೇಕು. ಐತಿಹಾಸಿಕ ಪಾರಂಪರಿಕ ತಾಣಗಳು ಅಧ್ಯಯನ ಮತ್ತು ಅದರ ಸಂರಕ್ಷಣೆಗೆ ಮುಂದಾಗಬೇಕು ಎಂದರು.

ಇತಿಹಾಸಕ್ಕೆ ಸಂಬಂಧಿಸಿದ ಉತ್ತಮ ಪುಸ್ತಕಗಳನ್ನು ಸ್ನೇಹಿತರನ್ನಾಗಿಸಿಕೊಂಡು ವಿಷಯದ ಆಳದಲ್ಲಿ ಹೆಕ್ಕಿ ಸಂಶೋಧನೆ ಮುಂದಾಗಿ ಸಮಾಜಕ್ಕೆ ಉತ್ತಮ ಕೊಡುಗೆಯನ್ನು ಕೊಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಹಾವಿದ್ಯಾಲಯ ಐಕ್ಯೂಎಸಿ ಸಂಯೋಜಕ ಡಾ.ಪಿ.ಎಸ್.ಪಾಟೀಲ, ಹೆರಿಟೇಜ್ ಕ್ಲಬ್ ಮುಖ್ಯಸ್ಥ ಡಾ. ಎಂ.ಬಿ.ಪಾಟೀಲ ಮಹಾವಿದ್ಯಾಲಯದ ಬೋಧಕ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಇತಿಹಾಸ ವಿಭಾಗದ ಮುಖ್ಯಸ್ಥ ಪ್ರೊ.ಐ.ಎಸ್.ಹೂಗಾರ ಪರಿಚಯ ಮತ್ತು ಸ್ವಾಗತಿಸಿದರು, ಪ್ರೊ.ಶ್ವೇತಾ ಸವನೂರ ನಿರೂಪಿಸಿದರು, ಪ್ರೊ. ರಾಜೇಶ್ವರಿ ಪುರಾಣಿಕ ವಂದಿಸಿದರು.

# ಚಿಮ್ಮಲಗಿಯಲ್ಲಿ ಅಡ್ಡಪಲ್ಲಕ್ಕಿ ಮಹೋತ್ಸವ ಸಂಪನ್ನ

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಸಮೀಪದ ಚಿಮ್ಮಲಗಿಯ ಅರಳೆಲೆಕಟ್ಟಿಮನಿ ಹಿರೇಮಠದ ಲಿಂಗೈಕ್ಯ ನೀಲಕಂಠ ಸ್ವಾಮೀಜಿ ಅವರ ಪ್ರಥಮ ಪುಣ್ಯ ಸ್ಮರಣೆ, ಸಿದ್ಧರೇಣುಕ ಶ್ರೀಗಳ ಅಡ್ಡಪಲ್ಲಕ್ಕಿ ಮಹೋತ್ಸವ, ಸಾಮೂಹಿಕ ವಿವಾಹ ಕಾರ್ಯಕ್ರಮ ಗುರುವಾರ ಜರುಗಿತು.

ಬೆಳಿಗ್ಗೆಯಿಂದಲೇ ಲಿಂಗೈಕ್ಯ ಶ್ರೀಗಳ ಗದ್ದುಗೆಗೆ ರುದ್ರಾಭಿಷೇಕ, ಬಿಲ್ವಾರ್ಚನೆ ಪೂಜೆಯ ನಂತರ, ಗ್ರಾಮದ ತುಂಬೆಲ್ಲಾ ಅಡ್ಡಪಲ್ಲಕ್ಕಿ ಮಹೋತ್ಸವ ಅದ್ದೂರಿಯಾಗಿ ಜರುಗಿತು.

ನಂತರ ನಾಲ್ಕು ಜತೆ ಸಾಮೂಹಿಕ ವಿವಾಹಗಳು ಜರುಗಿದವು.

ಬಸನಬಾಗೇವಾಡಿ ಶಿವಪ್ರಕಾಶ ಸ್ವಾಮೀಜಿ ಮಾತನಾಡಿ, ಬದುಕಿನುದ್ದಕ್ಕೂ ಸವಾಲುಗಳನ್ನು ಎದುರಿಸಿ ಸತ್ಯ ಸಂಸ್ಕೃತಿ ಪುನರುತ್ಥಾನಕ್ಕಾಗಿ ಸದಾ ಶ್ರಮಿಸಿದವರು ನೀಲಕಂಠ ಶ್ರೀಗಳು.




ಪರಮ ತಪಸ್ವಿ ಲಿಂ.ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ಗರಡಿಯಲ್ಲಿ ಪಳಗಿ ಗುರು ಕಾರುಣ್ಯ ಪಡೆದರು. ಪೂಜಾ ತಪಸ್ಸು ಧ್ಯಾನ ಮೂಲಕ ಭಕ್ತರ ಬಾಳ ಬದುಕನ್ನು ಹಸನಗೊಳಿಸಿದವರು ಎಂದರು.

ಶ್ರೀ ಮಠದ ಪೀಠಾಧೀಪತಿ ಸಿದ್ಧರೇಣುಕ ಸ್ವಾಮೀಜಿ ಕಾರ್ಯಕ್ರಮದ ನೇತೃತ್ವ ವಹಿಸಿದ್ದರು.

ನಿಡಗುಂದಿಯ ರುದ್ರಮುನಿ ಸ್ವಾಮೀಜಿ, ಮುತ್ತಗಿಯ ಗುರುಲಿಂಗ ಸ್ವಾಮೀಜಿ, ಇಟಗಿಯ ಗುರುಶಾಂತವೀರ ಸ್ವಾಮೀಜಿ, ಗುಂಡಕನಾಳ ಗುರುಲಿಂಗ ಸ್ವಾಮೀಜಿ, ಆಲಮೇಲದ ಚಂದ್ರಶೇಖರ ಸ್ವಾಮೀಜಿ, ಇಂಗಳೇಶ್ವರದ ಭೃಂಗೀಶ್ವರ ಸ್ವಾಮೀಜಿ, ಕೊಟ್ನೂರಿನ ಡಾ ಸಿದ್ಧಲಿಂಗ ಸ್ವಾಮೀಜಿ, ತಡವಲಗಾದ ಅಭಿನವ ರಾಚೋಟೇಶ್ವರ ಸ್ವಾಮೀಜಿ, ಗಿರಿಸಾಗರದ ರುದ್ರಮುನಿ ಸ್ವಾಮೀಜಿ, ಮುಳವಾಡದ ಸಿದ್ಧಲಿಂಗ ಸ್ವಾಮೀಜಿ, ಬಿಲ್ ಕೆರೂರಿನ ಸಿದ್ಧಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

ಶಾಸಕ ರಾಜುಗೌಡ ಪಾಟೀಲ, ಅಪ್ಪುಗೌಡ ಪಾಟೀಲ ಮನಗೂಳಿ, ಸಂಯುಕ್ತಾ ಪಾಟೀಲ, ಅನ್ನಪೂರ್ಣ ಮನಗೂಳಿ, ಡಾ ವಿಜಯಕುಮಾರ ವಾರದ, ಮನೋಜ ವಾರದ, ಬ್ರಿಷಭೂಷಣ ಖಂಡಾಲ, ಜಯೇಂದ್ರ ಶರ್ಮ ಮತ್ತೀತರರು ಇದ್ದರು.

# ಸಮ ಸಮಾಜಕ್ಕೆ ಶ್ರಮಿಸಿದ ಮಡಿವಾಳ ಮಾಚಿದೇವ



**ಉದಯರಶ್ಮಿ ನ್ಯೂಸ್**

ವಿಜಯಪುರ: ಕಲ್ಯಾಣ ಕರ್ನಾಟಕದ ಬಸವ ಕಲ್ಯಾಣದ ಅನುಭವ ಮಂಟಪದ 12ನೇ ಶತಮಾನದಲ್ಲಿ ಸಮ ಸಮಾಜದ ಕನಸು ಕಂಡು ಆದಿಸೆಯಲ್ಲಿ ತಮ್ಮ ವಚನಗಳ ಮೂಲಕ ಪ್ರತಿಪಾದಿಸಿದ ಮಡಿವಾಳ ಮಾಚಿದೇವ ಶರಣರು ಎಂದು ಅಪರ ಜಿಲ್ಲಾಧಿಕಾರಿ ಮಹದೇವ ಮುರಗಿ ಹೇಳಿದರು.

ಗುರುವಾರ ನಗರದ ಕಂದಗಲ್ಲ ಶ್ರೀ ಹನಮಂತರಾಯ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶರಣರು ಅಂದು ಹಾಕಿಕೊಟ್ಟ ಹಾಗೂ ತಿಳಿಸಿದ ವಿಚಾರಗಳು ಇಂದಿಗೂ ಎಂದೆಂದಿಗೂ ಪ್ರಸ್ತುತವಾಗಿವೆ. ಅಂದಿನ ಬಸವಾದಿ ಶರಣರು ಕಾಯಕ ತತ್ವವನ್ನು ಅನುಸರಿಸಬೇಕು ಹಾಗೂ ಅವರ ಜೀವನ ಆದರ್ಶಗಳನ್ನು ಅಳವಡಿಕೊಳ್ಳಬೇಕು ಎಂದು ಅವರು ಹೇಳಿದರು.

ಅಪರ ಪೊಲೀಸ್ ವರಿಷ್ಠಾಧಿಕಾರಿ ರಾಮನಗೌಡ ಹಟ್ಟಿ ಮಾತನಾಡಿ, ಶರಣರು 12 ನೇ ಶತಮಾನದಲ್ಲಿ ಸುಮರು 770 ಶಿವಶರಣರು ಒಂದೆಡೆ ಸೇರಿ ಅನುಭವ ಮಂಟಪದಲ್ಲಿ ಸಾಮಾಜಿಕ ಪರಿವರ್ತನೆಗಾಗಿ ಏಕತೆಗಾಗಿ ಚಿಂತನ-ಮಂಥನ ಹಾಗೂ ಗೋಷ್ಠಿಗಳನ್ನು ನಡೆಸುತ್ತಿದ್ದರು. ಅಂದಿನ ವಚನಗಳು ಇಂದು ನಮ್ಮ ಜೀವನೋಪಾಯ ನಡೆಸಲು ಒಂದು ದಾರಿಯಾಗಿವೆ ಎಂದರು.

ಉಪನ್ಯಾಸಕ ಮಂಜುನಾಥ ಜುನಗೊಂಡ ಮಾತನಾಡಿ, ಜಯಂತಿಗಳು ಅದ್ದೂರಿಯಾಗಿ ಆಚರಿಸಬೇಕು ಕೇವಲ ಒಂದೇ ಸಮಾಜಕ್ಕೆ ಸೀಮಿತವಾಗದೆ ಎಲ್ಲ ಸಮಾಜ ಬಾಂಧವರನ್ನು ಜಯಂತಿಯಂದು ಕರೆತರಬೇಕು ನಾವೆಲ್ಲರೂ ಒಂದೇ ಎಂಬ ಭಾವನೆ ನಮ್ಮಲ್ಲಿ ಬರಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯತ ಕಾರ್ಯನಿರ್ವಹಣಾಧಿಕಾರಿ ಹೊಂಗಯ್ಯ, ಜಿ.ಪಂ ಯೋಜನಾಧಿಕಾರಿ ಎ.ಬಿ ಅಲ್ಲಾಪುರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿ ಅಯ್ಯುಬ್ ದ್ರಾಕ್ಷಿ, ಜಿಲ್ಲಾ ಮಡಿವಾಳ ಸಂಘದ ಅಧ್ಯಕ್ಷ ಸಾಯಬಣ್ಣ ಮಡಿವಾಳರ, ಸಮಾಜದ ಮುಖಂಡರಾದ ಬಾಬು ಬಳ್ಳಾರಿ, ಮುತ್ತಪ್ಪ ಮಡಿವಾಳರ, ಪ್ರಭು ಮಡಿವಾಳರ, ಶಿವಪ್ಪ ಹುಬ್ಬಳ್ಳಿ, ಶ್ರೀಶೈಲ ಅಗಸರ, ಮಲಕಪ್ಪ ಹುಬ್ಬಳ್ಳಿ, ಸಂತೋಷ ಬಾಗಲಕೋಟ, ವಿದ್ಯಾವತಿ ಅಂಕಲಗಿ, ಭೀಮರಾಯ ಜಿಗಜಿಣಗಿ, ದೇವೇಂದ್ರ ಮಿರೇಕರ, ಗಿರೀಶ ಕುಲಕರ್ಣಿ ಹಾಗೂ ಇತರರು ಉಪಸ್ಥಿತರಿದ್ದರು. ಸುಭಾಸ ಕಲ್ಲೂರ ನಿರೂಪಿಸಿದರು.

ಇದಕ್ಕೂ ಮೊದಲು ಬೆಳಿಗ್ಗೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಆರಂಭಗೊಂಡ ಭಾವಚಿತ್ರ ಮೆರವಣಿಗೆಗೆ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಚಾಲನೆ ನೀಡಿದರು.

## ಅಭಿವೃದ್ಧಿ ಪರವಾದ ಉತ್ತಮ ಬಜೆಟ್ :ರಾವೂರ



**ಉದಯರಶ್ಮಿ ನ್ಯೂಸ್**

ಸಿಂದಗಿ: ಕೇಂದ್ರ ಸರ್ಕಾರವು ಭಾರತದ ಏಳಿಗೆಗೆ ಪೂರಕವಾದ ಬಜೆಟ್ ಮಂಡಿಸಿದ್ದು ಬಡವರು, ಮಹಿಳೆಯರು, ರೈತರು ಹಾಗೂ ಯುವ ಸಮುದಾಯವನ್ನು ಗಮನದಲ್ಲಿಟ್ಟುಕೊಂಡು ಮಂಡಿಸಿದ ಅಭಿವೃದ್ಧಿ ಪರವಾದ ಉತ್ತಮ ಬಜೆಟ್ ಇದಾಗಿದೆ ಎಂದು ಸಿಂದಗಿ ಬಿಜೆಪಿ ಮಂಡಲ ಅಧ್ಯಕ್ಷ ಈರಣ್ಣ ರಾವೂರ ಅಭಿಪ್ರಾಯಿಸಿದ್ದಾರೆ.

# ದೇಶದ ಭವಿಷ್ಯ ರೂಪಿಸುವ ಬಜೆಟ್ :ಸಾವಿತ್ರಿ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿರುವ ಕೇಂದ್ರ ಸರಕಾರ ಮಧ್ಯಂತರ ಬಜೆಟ್ ಪ್ರಧಾನಮಂತ್ರಿ ಮೋದಿಯವರು ಹೇಳಿದ ಹಾಗೆ ದೇಶದ ಭವಿಷ್ಯ ರೂಪಿಸುವ ಬಜೆಟ್ ಆಗಿದೆ. ಕಾರ್ಯಕರ್ತೆಯರಿಗೆ, ಸಹಾಯಕರಿಗೆ, ಆಶಾ ಕಾರ್ಯಕರ್ತೆಯರಿಗೆ ಆಯುಷ್ಮಾನ್ ಭಾರತ ಯೋಜನೆಯನ್ನು ಜಾರಿಗೆ ತಂದಿರುವುದು ಉತ್ತಮ ಬೆಳವಣಿಗೆಯಾಗಿದೆ. ಒಂದು ಕೋಟಿ ಮನೆಗಳಿಗೆ ಸೋಲಾರ್ ವಿದ್ಯುತ್ತನ್ನು, ಪ್ರತಿ ಮನೆಗೆ 300 ಯುನಿಟ್ ಪುಕ್ಕಟೆಯಾಗಿ ಒದಗಿಸುವುದು ಬಜೆಟ್‌ನ ಮುಖ್ಯ ಗುರಿಯಾಗಿದೆ. ಆಧುನಿಕ ಮೂಲಭೂತ ಸೌಕರ್ಯಕ್ಕೆ ಹೆಚ್ಚಿನ ಒತ್ತು, ಪ್ರವಾಸೋದ್ಯಮ ಇಲಾಖೆಗೆ ಹೆಚ್ಚಿನ ಗಮನ ನೀಡಿರುವುದು, ರಕ್ಷಣಾ ಇಲಾಖೆಗೆ 11 ಲಕ್ಷ ಕೋಟಿ



ಹಣವನ್ನು ಮೀಸಲಾಗಿರಿಸಿರುವದು ಸೇರಿದಂತೆ ಹಲವಾರು ಜನಪರ ಯೋಜನೆಗಳನ್ನು ಜಾರಿಗೆ ತರುವಲ್ಲಿ ಒತ್ತುಕೊಡಲಾಗಿದೆ. ಒಟ್ಟಾರೆಯಾಗಿ ಬಜೆಟ್ ಬಡವರ ಹಾಗೂ ಮಧ್ಯಮ ವರ್ಗದವರ ಪರವಾಗಿದೆ ಎಂದು ಭಾರತೀಯ ಜನತಾ ಪಕ್ಷದ ಮಹಿಳಾ ಮಂಡಲ ಅಧ್ಯಕ್ಷೆ ಸಾವಿತ್ರಿ ಕಲ್ಯಾಣಶೆಟ್ಟಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಸಮ ಸಮಾಜಕ್ಕೆ ಶ್ರಮಿಸಿದ ಮಡಿವಾಳ ಮಾಚಿದೇವ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕಲ್ಯಾಣ ಕರ್ನಾಟಕದ ಬಸವ ಕಲ್ಯಾಣದ ಅನುಭವ ಮಂಟಪದ 12ನೇ ಶತಮಾನದಲ್ಲಿ ಸಮ ಸಮಾಜದ ಕನಸು ಕಂಡು ಆದಿಸೆಯಲ್ಲಿ ತಮ್ಮ ವಚನಗಳ ಮೂಲಕ ಪ್ರತಿಪಾದಿಸಿದ ಮಡಿವಾಳ ಮಾಚಿದೇವ ಶರಣರು ಎಂದು ಅಪರ ಜಿಲ್ಲಾಧಿಕಾರಿ ಮಹದೇವ ಮುರಗಿ ಹೇಳಿದರು.

ಗುರುವಾರ ನಗರದ ಕಂದಗಲ್ಲ ಶ್ರೀ ಹನಮಂತರಾಯ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶರಣರು ಅಂದು ಹಾಕಿಕೊಟ್ಟ ಹಾಗೂ ತಿಳಿಸಿದ ವಿಚಾರಗಳು ಇಂದಿಗೂ ಎಂದೆಂದಿಗೂ ಪ್ರಸ್ತುತವಾಗಿವೆ. ಅಂದಿನ ಬಸವಾದಿ ಶರಣರು ಕಾಯಕ ತತ್ವವನ್ನು ಅನುಸರಿಸಬೇಕು ಹಾಗೂ ಅವರ ಜೀವನ ಆದರ್ಶಗಳನ್ನು ಅಳವಡಿಕೊಳ್ಳಬೇಕು ಎಂದು ಅವರು ಹೇಳಿದರು.

ಅಪರ ಪೊಲೀಸ್ ವರಿಷ್ಠಾಧಿಕಾರಿ ರಾಮನಗೌಡ ಹಟ್ಟಿ ಮಾತನಾಡಿ, ಶರಣರು 12 ನೇ ಶತಮಾನದಲ್ಲಿ ಸುಮರು 770 ಶಿವಶರಣರು ಒಂದೆಡೆ ಸೇರಿ ಅನುಭವ ಮಂಟಪದಲ್ಲಿ ಸಾಮಾಜಿಕ ಪರಿವರ್ತನೆಗಾಗಿ ಏಕತೆಗಾಗಿ ಚಿಂತನ-ಮಂಥನ ಹಾಗೂ ಗೋಷ್ಠಿಗಳನ್ನು ನಡೆಸುತ್ತಿದ್ದರು. ಅಂದಿನ ವಚನಗಳು ಇಂದು



ನಮ್ಮ ಜೀವನೋಪಾಯ ನಡೆಸಲು ಒಂದು ದಾರಿಯಾಗಿವೆ ಎಂದರು.

ಉಪನ್ಯಾಸಕ ಮಂಜುನಾಥ ಜುನಗೊಂಡ ಮಾತನಾಡಿ, ಜಯಂತಿಗಳು ಅದ್ದೂರಿಯಾಗಿ ಆಚರಿಸಬೇಕು ಕೇವಲ ಒಂದೇ ಸಮಾಜಕ್ಕೆ ಸೀಮಿತವಾಗದೆ ಎಲ್ಲ ಸಮಾಜ ಬಾಂಧವರನ್ನು ಜಯಂತಿಯಂದು ಕರೆತರಬೇಕು ನಾವೆಲ್ಲರೂ ಒಂದೇ ಎಂಬ ಭಾವನೆ ನಮ್ಮಲ್ಲಿ ಬರಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯತ ಕಾರ್ಯನಿರ್ವಹಣಾಧಿಕಾರಿ ಹೊಂಗಯ್ಯ, ಜಿ.ಪಂ ಯೋಜನಾಧಿಕಾರಿ ಎ.ಬಿ ಅಲ್ಲಾಪುರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿ ಅಯ್ಯುಬ್ ದ್ರಾಕ್ಷಿ, ಜಿಲ್ಲಾ ಮಡಿವಾಳ ಸಂಘದ ಅಧ್ಯಕ್ಷ ಸಾಯಬಣ್ಣ ಮಡಿವಾಳರ, ಸಮಾಜದ ಮುಖಂಡರಾದ ಬಾಬು ಬಳ್ಳಾರಿ, ಮುತ್ತಪ್ಪ ಮಡಿವಾಳರ, ಪ್ರಭು ಮಡಿವಾಳರ, ಶಿವಪ್ಪ ಹುಬ್ಬಳ್ಳಿ, ಶ್ರೀಶೈಲ ಅಗಸರ, ಮಲಕಪ್ಪ ಹುಬ್ಬಳ್ಳಿ, ಸಂತೋಷ ಬಾಗಲಕೋಟ, ವಿದ್ಯಾವತಿ ಅಂಕಲಗಿ, ಭೀಮರಾಯ ಜಿಗಜಿಣಗಿ, ದೇವೇಂದ್ರ ಮಿರೇಕರ, ಗಿರೀಶ ಕುಲಕರ್ಣಿ ಹಾಗೂ ಇತರರು ಉಪಸ್ಥಿತರಿದ್ದರು. ಸುಭಾಸ ಕಲ್ಲೂರ ನಿರೂಪಿಸಿದರು.

ಇದಕ್ಕೂ ಮೊದಲು ಬೆಳಿಗ್ಗೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಆರಂಭಗೊಂಡ ಭಾವಚಿತ್ರ ಮೆರವಣಿಗೆಗೆ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಚಾಲನೆ ನೀಡಿದರು.

**ಫೆ.5ರಂದು ಸಿಂದಗಿಯಲ್ಲಿ ಜರುಗಲಿರುವ ತಾಲೂಕು 6ನೇ ಕನ್ನಡ ಸಾಹಿತ್ಯ ಸಮ್ಮೇಳನ**


# ತಾಲೂಕು ಸಮ್ಮೇಳನ ಸರ್ವಾಧ್ಯಕ್ಷರಾಗಿ ವಾಡೇದ ಆಯ್ಕೆ

**ಉದಯರಶ್ಮಿ ನ್ಯೂಸ್**

ಸಿಂದಗಿ: ಪಟ್ಟಣದ ಎಚ್.ಜಿ ಪ್ರೌಢಶಾಲೆ ಆವರಣದಲ್ಲಿ ಫೆ.5ರಂದು ಜರುಗಲಿರುವ ಸಿಂದಗಿ ತಾಲೂಕು 6ನೇ ಕನ್ನಡ ಸಾಹಿತ್ಯ

ಸಮ್ಮೇಳನದ ಸರ್ವಾಧ್ಯಕ್ಷರಾಗಿ ವಿಶ್ರಾಂತ ಉಪನ್ಯಾಸಕ, ಮಕ್ಕಳ ಸಾಹಿತಿ ರಾ.ಸಿ, ವಾಡೇದ ಅವರು ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ.

ಮಕ್ಕಳ ಸಾಹಿತಿ ರಾ.ಸಿ, ವಾಡೇದ ಕನ್ನಡ ವಿಷಯದಲ್ಲಿ ಎಂಎ ಪದವೀಧರರು. ಅವರು ಸ್ಥಳೀಯ ಅಂಜುಮನ್ ಪಿಯು ಕಾಲೇಜಿನಲ್ಲಿ ಕನ್ನಡ ಪ್ರಾಧ್ಯಾಪಕರಾಗಿ 32 ವರ್ಷ ಸೇವೆ ಸಲ್ಲಿಸಿದ್ದಾರೆ. ವೃತ್ತಿ ಉಪನ್ಯಾಸವಾದರೇ ಪ್ರವೃತ್ತಿ ಮಕ್ಕಳ ಸಾಹಿತ್ಯ ರಚನೆಯಾಗಿದೆ. ಅವರು ಸುಂದರ ಚಂದಿರ, ಮಾಯದ ಕುದರೆ ಮತ್ತು ಇತರ ನಾಟಕಗಳು, ಕೈ ತೋಟ, ಚಿಣ್ಣರ ಆಟ, ಬೆಳಕು, ಧಡಂ ಧುಡಕಿ, ತುತ್ತೂರಿ, ಸ್ನೇಹ ಸಿರಿ, ಅಜ್ಜಿಯ ಆಸೆ, ಟಂಟಂ ಗಾಡಿ, ಜಾನಪದ ಕಥೆಗಳು ಹೀಗೆ ಮಕ್ಕಳ ಕೃತಿಗಳು ಸೇರಿದಂತೆ ಹಲವು ಸಾಹಿತ್ಯ ಕೃತಿಗಳನ್ನು ರಚಿಸಿದ್ದಾರೆ. ಮಕ್ಕಳ ಸಾಹಿತ್ಯ ಚಿಂತನ



ವೇದಿಕೆ ಅಧ್ಯಕ್ಷರಾಗಿ, ಚಲನಚಿತ್ರ ಬೆಳ್ಳಿ ಅಡಾಡೆಮಿ ವಿಜಯಪುರದ ಸದಸ್ಯರಾಗಿ, ಚುಟುಕು ಸಾಹಿತ್ಯ ಪರಿಷತ್ ತಾಲೂಕಾಧ್ಯಕ್ಷರಾಗಿ, ಕನ್ನಡ ಸಾಹಿತ್ಯ ಪರಿಷತ್ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸುವ ಜೊತೆಗೆ ಹತ್ತು ಹಲವು ಸಾಹಿತ್ಯ ಕ್ಷೇತ್ರಕ್ಕೆ ಸಂಬಂಧಿಸಿದ ಸಂಘ-ಸಂಸ್ಥೆಗಳ ವಿವಿಧ ಹುದ್ದೆಗಳನ್ನು ಅಲಂಕರಿಸಿ ಸಾಹಿತ್ಯ ಸೇವೆ ಸಲ್ಲಿಸಿದ್ದಾರೆ.

ಸಿಂದಗಿ ಪಟ್ಟಣದಲ್ಲಿ ನಡೆಯುಲಿರುವ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ರಾ.ಸಿ. ವಾಡೇದ ಅಯ್ಕೆಯಾಗಿದ್ದು ಸಾಹಿತ್ಯ ಬಳಗಕ್ಕೆ ಸಂತಸ ತಂದಿದೆ.

# ಆಲಮಟ್ಟಿಗೆ ನಾಳೆ ಡಿಸಿಎಂ ಆಗಮನ



**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಫೆ.3 ರಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಆಲಮಟ್ಟಿಗೆ ಆಗಮಿಸಲಿದ್ದು, ಕೃಷ್ಣಾ ಮೇಲ್ದಂಡೆ ಯೋಜನೆಯ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ.

ಶನಿವಾರ ಕಲಬುರಗಿಯಿಂದ ರಸ್ತೆ ಮೂಲಕ ಮಧ್ಯಾಹ್ನ 12 ಕ್ಕೆ ಬಸವನಬಾಗೇವಾಡಿ ತಾಲ್ಲೂಕಿನ ಮನಗೂಳಿಯ ಸಂಗನಬಸವ ಸ್ವಾಮೀಜಿಗಳ ಬೆಳ್ಳಿ ಮಹೋತ್ಸವ ಅಂಗವಾಗಿ ಮನಗೂಳಿ ಕಲ್ಯಾಣ ಮಂಟಪದಲ್ಲಿ ನೂತನ ರಥೋತ್ಸವ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಅಲ್ಲಿಂದ ಮಧ್ಯಾಹ್ನ 3 ಕ್ಕೆ ಆಲಮಟ್ಟಿಗೆ ಆಗಮಿಸುವ ಅವರು, ಇಲ್ಲಿಯ ವ್ಯವಸ್ಥಾಪಕ ನಿರ್ದೇಶಕರ ಕಚೇರಿಯಲ್ಲಿ ಕೆಬಿಜೆಎನ್ ಎಲ್ ಅಧಿಕಾರಿಗಳ ಜತೆ ಕಾಮಗಾರಿಗಳ ಪರಿಶೀಲನಾ ಸಭೆ ನಡೆಸಲಿದ್ದಾರೆ. ಸಂಜೆ 6 ಕ್ಕೆ ಆಲಮಟ್ಟಿಯಿಂದ ಹುಬ್ಬಳ್ಳಿಗೆ ರಸ್ತೆ ಮೂಲಕ ತೆರಳಿ ಅಲ್ಲಿಂದ ಬೆಂಗಳೂರಿಗೆ ತೆರಳಲಿದ್ದಾರೆ.

# ಕೇಂದ್ರ ಬಜೆಟ್: ಬಿಜೆಪಿ ಮುಖಂಡರ ಮೆಚ್ಚುಗೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಕೇಂದ್ರ ಬಜೆಟ್ ಜನಪರವಾಗಿದ್ದು ಜನರ ಮೆಚ್ಚುಗೆಗೆ ಪಾತ್ರವಾಗಿದೆ ಎಂದು ಸಂಸದ ರಮೇಶ ಜಿಗಜಿಣಗಿ ಹೇಳಿದ್ದಾರೆ.

ಈ ಕುರಿತು ಬಜೆಟ್ ಪ್ರತಿಕ್ರಿಯೆ ನೀಡಿರುವ ಅವರು, ಚುನಾವಣೆ ದೃಷ್ಟಿಕೋನ ಇರಿಸದೇ ಜನಪರ ನಿಲುವಿನ ಹಾಗೂ ದೇಶದ ಪ್ರಗತಿಯ ದೃಷ್ಟಿಯಿಂದ ಬಜೆಟ್ ಮಂಡನೆಯಾಗಿದೆ.

ಯಾವ ಹೊಸ ತೆರಿಗೆಯನ್ನು ವಿಧಿಸದೇ ಜನಸಾಮಾನ್ಯ–ರಿಗೆ ಅನುಕೂಲ ಕಲ್ಪಿಸಲಾಗಿದೆ, ಸೋಲಾರ್ ಮೂಲಕ ಮನೆ ಮನೆಗೂ ಉಚಿತವಾಗಿ ವಿದ್ಯುತ್ ಪೂರೈಸುವ ಸಂಕಲ್ಪವನ್ನು ಮಾಡಿರುವುದು ಒಂದು ಉತ್ತಮ ಹೆಜ್ಜೆಯಾಗಿದೆ.



ಮಾರಕ ಕ್ಯಾನ್ಸರ್ ರೋಗದಿಂದ ತಪ್ಪಿಸಲು ಮಕ್ಕಳಿಗೆ ವಿಶೇಷ ಲಸಿಕೆ ನೀಡಲು ಮುಂದಾಗಿರುವುದು ಕೇಂದ್ರ ಸರ್ಕಾರದ ಆರೋಗ್ಯ ಕಾಳಜಿಯ ಉದಾಹರಣೆಯಾಗಿದೆ. ಒಟ್ಟಾರೆಯಾಗಿ ರೈತಪರ, ಶ್ರೀಸಾಮಾನ್ಯನ ಪರ, ದುಡಿಯುವ ವರ್ಗದ ಪರವಾದ ಬಜೆಟ್ ಮಂಡನೆಯಾಗಿದೆ ಎಂದು ಅವರು ಹೇಳಿದ್ದಾರೆ.



ಬಿಜೆಪಿ ಜಿಲ್ಲಾಧ್ಯಕ್ಷ ಆರ್.ಎಸ್. ಪಾಟೀಲ ಕುಚಬಾಳ ಸಹ ಪ್ರತಿಕ್ರಿಯೆ ನೀಡಿ, ಜನಪ್ರಿಯತೆಗಿಂತ ಜನಪರತೆಗೆ ಒತ್ತು ನೀಡಿರುವುದು ಕೇಂದ್ರ ಬಿಜೆಪಿ ಸರ್ಕಾರದ ಜನಪರ ಕಾಳಜಿಗೆ ಸಾಕ್ಷಿಯಾಗಿದೆ. ಎಲ್ಲ ವರ್ಗಗಳ ಕಲ್ಯಾಣ ಕೇಂದ್ರಿಕರಿಸಿ ಬಜೆಟ್ ಮಂಡನೆಯಾಗಿದೆ. ವಿಶ್ವ ಆರ್ಥಿಕ ರಂಗದಲ್ಲಿ ಭಾರತ ಮುನ್ನಡೆಯಲು ಪೂರಕವಾಗಿ ಈ ಬಜೆಟ್ ರೂಪಿಸಿ ಮಂಡಿಸಲಾಗಿದೆ. ರೈತರಿಗೆ 1 ಲಕ್ಷ ರೂ. ಶೂನ್ಯ ಬಡ್ಡಿದರದಲ್ಲಿ ಸಾಲ,

ಪಿಎಂ ಆವಾಸ್ ಯೋಜನೆಯಡಿಯಲ್ಲಿ 3 ಕೋಟಿ ರೂ.ಮನೆ ನಿರ್ಮಾಣ, ಮೀನುಗಾ–ರಿಕಾ ವಲಯದಲ್ಲಿ 55 ಲಕ್ಷ ಹೊಸ ಉದ್ಯೋಗ

ಸೃಷ್ಟಿ ಹೀಗೆ ದುಡಿಯುವ ಕೈಗಳಿಗೆ ಕೆಲಸ, ಬಡವರಿಗೆ ಅಭಯ, ಮಹಿಳಾ ಸಬಲೀಕರಣ ಒತ್ತು ಹೀಗೆ ಎಲ್ಲ ವಲಯಗಳಲ್ಲಿಯೂ ಬಜೆಟ್ ವ್ಯಾಪಿಸಿದೆ, ಇದು ಒಂದು ಅದ್ಭುತ ಬಜೆಟ್ ಎಂದು ಅವರು ಹೇಳಿದ್ದಾರೆ.

ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಅವರು ಪ್ರತಿಕ್ರಿಯೆ ನೀಡಿ, ಆರೋಗ್ಯದ ಬಗ್ಗೆ ಈ ಬಜೆಟ್ ನಲ್ಲಿ ಒತ್ತು ನೀಡುವ ಮೂಲಕ ಆರೋಗ್ಯ ಭಾಗ್ಯ ಕರುಣಿಸುವ ಪಣ ತೊಡಲಾಗಿದೆ. ಮಾರಕ ಕ್ಯಾನ್ಸರ್ ರೋಗದಿಂದ ರಕ್ಷಿಸಲು ಮಕ್ಕಳಿಗೆ ವ್ಯಾಕ್ಸೀನ್, ಆಸ್ಪತ್ರೆಗಳ ಕುಂದುಕೊರತೆಗಳನ್ನು ನಿವಾರಿಸಲು ವಿಶೇಷ ಸಮಿತಿ ರಚನೆ ಹೀಗೆ ಅನೇಕ ಕ್ರಮ ಕೈಗೊಳ್ಳುವ ಘೋಷಣೆ ಮಾಡಿರುವುದು ಜನರ ಆರೋಗ್ಯಕ್ಕೆ ಆದ್ಯತೆ ನೀಡಲಾಗಿದೆ ಎಂದು ಅವರು ಹೇಳಿದ್ದಾರೆ.

ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ ಶಹಾಪೂರ, ಪ್ರತಿಕ್ರಿಯೆ ನೀಡಿ,

ಲಕ್ ಪತಿ ದೀದಿ ಯೋಜನೆ ಗುರಿ ಹೆಚ್ಚಿಸಿ 3 ಕೋಟಿ ಮಹಿಳೆಯರನ್ನು ಆರ್ಥಿಕ ಸಬಲೀಕರಣವಾಗಿಸುವ ಮಹತ್ವದ ಯೋಜನೆ, ಸೋಲಾರ್ ಮೂಲಕ ಮನೆಗಳಿಗೆ ಉಚಿತ ವಿದ್ಯುತ್ ಪೂರೈಕೆಗೆ ಒತ್ತು ನೀಡಿರುವುದು ಹೀಗೆ ಪ್ರತಿ ಅಂಶವೂ ಜನಪರವಾಗಿದೆ, ಇದು ಜನರು ಮೆಚ್ಚಿದ ಬಜೆಟ್ ಎಂದು ಹೇಳಿದರು.



ಕರ್ನಾಟಕ ಸಾವಯವ ಬೀಜ ಪ್ರಮಾಣನ ಸಂಸ್ಥೆ ಅಧ್ಯಕ್ಷ ವಿಜುಗೌಡ ಪಾಟೀಲ ಪ್ರತಿಕ್ರಿಯೆ ನೀಡಿ, ಕೇಂದ್ರ ಬಜೆಟ್ ಚುನಾವಣಾ ದೃಷಿಕೋನದ ಬಜೆಟ್ ಆಗದೇ ಜನರ ಹಾಗೂ ದೇಶದ ಪ್ರಗತಿಯ ಬಜೆಟ್ ಆಗಿದೆ. ಕೋವಿಡ್ ಕಾಲಘಟ್ಟದಲ್ಲಿ ಜೀವವನ್ನೇ ಪಣಕ್ಕಿಟ್ಟು ದುಡಿದ ಆಶಾ, ಅಂಗನವಾಡಿ ಕಾರ್ಯಕರ್ತೆಯರಿಗೂ ಆಯುಷ್ಮಾನ್ ವಿಸ್ತರಣೆ ಮಾಡಿರುವುದು ಅಭೂತಪೂರ್ವ ಸಂಗತಿ ಎಂದು ಅವರು ಹೇಳಿದ್ದಾರೆ.

ಕರ್ನಾಟಕ ಲಿಂಬೆ ಅಭಿವೃದ್ಧಿ ಮಂಡಳಿ ಮಾಜಿ ಅಧ್ಯಕ್ಷ ಚಂದ್ರಶೇಖರ ಕವಟಗಿ ಪ್ರತಿಕ್ರಿಯೆ ನೀಡಿ, ಇಂದ್ರಧನುಷ್ ಯೋಜನೆ ದೇಶದಾದ್ಯಂತ ವಿಸ್ತರಣೆ, 1 ಕೋಟಿ ಮನೆಯ ಮಾಳಿಗೆಯ ಮೇಲೆ ಸೋಲಾರ್ ಪ್ಲೇಟ್ ಅಳವಡಿಕೆ ಮೂಲಕ ವಿದ್ಯುತ್ ಉತ್ಪಾದನಾ ಸ್ವಾವಲಂಬನೆಗೆ ಒತ್ತು ನೀಡಲಾಗಿದೆ ಎಂದು ಅವರು ಹೇಳಿದ್ದಾರೆ.



ಬಿಜೆಪಿ ಹಿರಿಯ ಧುರೀಣ ವಿವೇಕಾನಂದ ಡಬ್ಬಿ ಪ್ರತಿಕ್ರಿಯೆ ನೀಡಿ, ಜನರ ಕಲ್ಯಾಣ ಗು–ರಿಯಾಗಿಸಿಕೊಂಡ ಬಜೆಟ್ ಇದಾಗಿದ್ದು, ರೈಲ್ವೆ ಸೌಲಭ್ಯ ಮಹತ್ವದ ಪ್ರಮಾಣದಲ್ಲಿ ಒದಗಿಸಲಾಗಿದೆ, 40 ಸಾವಿರ ಸಾಮನ್ಯ ರೈಲು ಭೋಗಿಗಳನ್ನು ವಂದೇ ಭಾರತ ರೈಲಿನ ಮಾನದಂಡದಲ್ಲಿ ಪರಿವರ್ತನೆಗೆ ಒತ್ತು ನೀಡಿರುವುದು ಉತ್ತಮ ಸಂಗತಿ ಎಂದು ಅವರು ಹೇಳಿದ್ದಾರೆ.

ಪಾಲಿಕೆ ಸದಸ್ಯ ಶಿವರುದ್ರ ಬಾಗಲಕೋಟ ಪ್ರತಿಕ್ರಿಯೆ ನೀಡಿ, ಮೀನುಗಾರಿಕಾ ವಲಯದಲ್ಲಿ 55 ಲಕ್ಷ ಹೊಸಉದ್ಯೋಗ ಸೃಷ್ಟಿ, ನಮ್ಮ ದೇಶದ ಭವ್ಯತೆಯ ಪ್ರತೀಕವಾಗಿರುವ ಪ್ರವಾಸೋದ್ಯಮ ಸ್ಥಳಗಳ ಪ್ರಗತಿಗೆ ಒತ್ತು ನೀಡಲಾಗಿದೆ.

ಬಿಜೆಪಿ ಜಿಲ್ಲಾ ಮಾಧ್ಯಮ ಪ್ರಮುಖ ವಿಜಯ ಜೋಶಿ ಮಾತನಾಡಿ, ಎಣ್ಣೆ ಕಾಳುಗಳ ಉತ್ಪಾದನೆಗಾಗಿ ವಿಶೇಷ ಒತ್ತು, ಹೈನುಗಾ–ರಿಕಾ ಪ್ರಗತಿಗೆ ರೈತರಿಗೆ ನೆರವು ಹೀಗೆ ರೈತಪರವಾದ ಬಜೆಟ್ ಮಂಡನೆಯಾಗಿದೆ ಎಂದು ಅವರು ಹೇಳಿದ್ದಾರೆ.

# 109ನೇ ಇಸ್ವಿ ಪೂರ್ವದ ಹಾಲುಮತ ಗುರುಪೀಠ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ಹಾಲುಮತ ಸಮಾಜ 109 ನೇ ಇಸ್ವಿ ಪೂರ್ವ ಗುರುಪೀಠ ಹೊಂದಿತ್ತು ಎನ್ನುವುದಕ್ಕೆ ಕಂಚಿನ ಆದೇಶಪತ್ರವೊಂದು ಸಾಕ್ಷಿಯಾಗಿದೆ ಎಂದು ಎಸ್. ಆರ್.ಜೋಗಿ ವಕೀಲರು ಹೇಳಿದರು.

ಈ ಕುರಿತು ಕಂಚಿನ ಆದ–ೇಶಪತ್ರದ ಜೊತೆಗೆ ಹೇಳಿಕೆ ನೀಡಿರುವ ಅವರು, ಅಂದಿನ ಮೈಸೂರ ದೇಶದ ವ್ಯಾಪ್ತಿಯ ಇಂದಿನ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ




ಸರೂರ(ಸರವೂರ) ಗ್ರಾಮದಲ್ಲಿರುವ ಹಾಲುಮತದ ಮೂಲ ಗುರೂಪೀಠ ಶ್ರೀ ಶಾಂತಮುತ್ತಯ್ಯ ನವ–ರಿಂದ ಸ್ಥಾಪಿತವಾಗಿದ್ದು, ಭಕ್ತರ ಅನುಕೂಲಕ್ಕಾಗಿ ಕೊಪ್ಪಳದ ಕೇಂಡದಮಠ, ಬಂಕಾಪುರಮಠ, ಹಾಸನದ ಅಣತಿ ಮಠ ಹೀಗೆ ಹಲವಾರು ತನ್ನ ಅಧೀನ ಶಾಖಾ ಮಠಗಳನ್ನು ಹೊಂದಿದ ಉದಾಹರಣೆಗಳಿವೆ. ಸುಮಾರು 2 ಸಾವಿರ ವರ್ಷಕಿಂತ ಹೆಚ್ಚು ತನ್ನ ಅಸ್ತಿತ್ವ ಉಳಿಸಿ ಕೊಂಡು ಬಂದ ಶ್ರೀಮಠಕ್ಕೆ ಫೆ.02 ರಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಗುರು ರೇವಣಸಿದ್ದೇಶ್ವರರ ದರ್ಶನಕ್ಕಾಗಿ ಬೇಟಿ ನೀಡುತ್ತಿರುವುದು ಸ್ವಾಗತಾರ್ಹ. ಮುಖ್ಯ ಮಂತ್ರಿಗಳು ಮುಂಬರುವ ದಿನಗಳಲ್ಲಿ ಸುಕ್ಷೇತ್ರ ಸರೂರ ಗ್ರಾಮವನ್ನು ಅಭಿವೃದ್ಧಿ ಮಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಬಸವಣ್ಣನವರ ತತ್ವಗಳನ್ನು ಅಳವಡಿಸಿಕೊಳ್ಳಿ :ಕರ್ಜಗಿ

**ಉದಯರಶ್ಮಿ ನ್ಯೂಸ್**

ಸಿಂದಗಿ: ಬಸವಣ್ಣನವರ ವಚನ ತತ್ವಗಳನ್ನು ಅಳವಡಿಸಿಕೊಂಡರೆ ಜಗತ್ತಿನಲ್ಲಿ ಅಸಾದ್ಯ ಎನ್ನುವುದು ಯಾವದು ಇಲ್ಲಾ ಎಂದು ನಿವೃತ್ತ ಪ್ರಾಚಾರ್ಯ ಬಿ.ಪಿಕರ್ಜಗಿ ಹೇಳಿದರು.



ಪಟ್ಟಣದ ಬಸವೇಶ್ವರ ವೃತ್ತದಲ್ಲಿ ರಾಜ್ಯ ಸರಕಾರ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ನಿಮಿತ್ಯ ಜಾಗತಿಕ ಬಸವ ಶಾಂತಿ ಸಂಸ್ಥೆ, ಕತಾರ್ ವತಿಯಿಂದ ಸಚಿವ ಸಂಪುಟದ ಸಚಿವರಿಗೆ, ಶ್ರಮಿಸಿದ ಮಠಾಧೀಶ–ರಿಗೆ, ಬಸವ ಅನುಯಾಯಿಗಳಿಗೆ ಹಮ್ಮಿಕೊಂಡ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ಬಸವಣ್ಣನವರು ಜಗತ್ತಿಗೆ ಸರಳ ವಚನಗಳ ಮೂಲಕ ಅಂ–ಧಕಾರ ಕಳೆಯುವ ಗುರುವಾಗಿದ್ದಾರೆ ಎಂದರು.

ಈ ವೇಳೆ ಹಿಕ್ಕಣಗುತ್ತಿ ಲಿಂಗಾಯುತ ಮಹಾಮಠದ ಪ್ರಭುಲಿಂಗದೇವರು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಇದೇ ಸಂದರ್ಭದಲ್ಲಿ ಶಶಿಕಾಂತಗೌಡ ಪಾಟೀಲ, ರವಿ ರಾಥೋಡ್, ಎಂ.ಆರ್.ಡೋಣಿ, ಶಶಿಧರ್ ಹೆಬ್ಬಾಳ, ಶಿವಾನಂದ ಕಲಬುರ್ಗಿ, ಗುರು ತಾರಾಪೂರ, ಆರ್,ಆರ್.ಪಾಟೀಲ, ಲಿಂಬೆ ಅಭಿವೃದ್ಧಿ ನಿಗಮ ಮಂಡಳಿ ಮಾಜಿ ಅಧ್ಯಕ್ಷ ಅಶೋಕ ಅಲ್ಲಾಪುರ, ಆನಂದ ಶಾಬಾದಿ, ಚಂದ್ರಶೇಖರ ನಾಗರಬೆಟ್ಟ, ಎಂ.ಎಂ,ಹಂಗರಗಿ, ಶ್ರೀಶೈಲ ಯಳಮೇಲಿ ಸೇರಿದಂತೆ ಬಸವ ದಳದ ಸದಸ್ಯರು, ಬಸವಣ್ಣನವರ ಅನುಯಾಯಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು

# ಶರಣರ ಕಾಯಕ ತತ್ವ ಅಳವಡಿಸಿಕೊಳ್ಳಬೇಕು




**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಮಾಚಿದೇವನ ಜನ್ಮಭೂಮಿಯಲ್ಲಿ ಜನಿಸಿದ ನಾವೆಲ್ಲ ಮಾಚಿದೇವ, ಬಸವಣ್ಣ ಸೇರಿದಂತೆ ಎಲ್ಲ ಶರಣರ ಕಾಯಕ ತತ್ವವನ್ನು ತನು, ಮನದಿಂದ ಅಳವಡಿಸಿಕೊಳ್ಳಬೇಕಾಗಿದೆ ಎಂದು ತಹಶೀಲ್ದಾರ ಪ್ರಕಾಶ ಸಿಂದಗಿ ಹೇಳಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯದಲ್ಲಿ ಗುರುವಾರ ಜರುಗಿದ ಮಡಿವಾಳ ಮಾಚಿದೇವ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಜೀವನದಲ್ಲಿ ಶರಣರ ನಡೆ,ನುಡಿ ಇಂದಿಗೂ ಪ್ರಸ್ತುತ. ಅವರನ್ನು ಕೇವಲ ಜಯಂತಿಗಳಿಗೆ ಸೀಮಿತಗೊಳಿಸದೇ ಅವರ ನಡೆದ ಮಾರ್ಗ, ಕಾಯಕ ತತ್ವಗಳನ್ನು ಅರಿತು ಪಾಲಿಸಬೇಕಾಗಿದೆ ಎಂದರು.

ಶ್ರೀಬಸವ ಶರಣ ಸಂಗಮ ಸೇವಾ ಸಮಿತಿ ಅಧ್ಯಕ್ಷ ಸಂಗಪ್ಪ ತಡವಲ್, ನಿವೃತ್ತ ಶಿಕ್ಷಕರುಗಳಾದ ಪಂಚಾಕ್ಷರಿ ಮಿಂಚನಾಳ, ಬಿ.ಆಯ್.ಹೊಸಳ್ಳಿ ಮಾತನಾಡಿದರು.

ವಚನ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಜೆ.ಆರ್.ಬಿರಾದಾರ, ಉಪತಹಶೀಲ್ದಾರ ಸುರೇಶ ಮ್ಯಾಗೇರಿ, ಆಹಾರ ನಿರೀಕ್ಷಕ ದಳವಾಯಿ, ಗೊಲ್ಲಾಳ ಬಿರಾದಾರ, ರಾಮಯ್ಯ ನಾಶೀಮಠ, ಗುರುಪಾದ ಬುದ್ನಿ, ಮಲ್ಲಪ್ಪ ಭತಗುಣಕಿ. ಶ್ರೀಶೈಲ ಅಗಸರ, ಕಾಶೀನಾಥ ಅಗಸರ, ರಮೇಶ ಹಡಪದ, ಮಡಿವಾಳಪ್ಪ ಹಡಪದ, ದುಂಡೇಶ ಅಗಸರ, ಸುರೇಶ ಅಗಸರ ಸಿಬ್ಬಂದಿ ರಾಜು ಕಂಠಿ, ಇತರರು ಇದ್ದರು.

# ವಿದ್ಯುತ್ ದರ ಏರಿಕೆ ಪ್ರಸ್ತಾಪ ಕೈಬಿಡಲು ಆಗ್ರಹ

**ಉದಯರಶ್ಮಿ ನ್ಯೂಸ್**



ವಿಜಯಪುರ: ರಾಜ್ಯದಲ್ಲಿ ವಿದ್ಯುತ್ ಕಂಪನಿಗಳ ನಷ್ಟ ತಗ್ಗಿಸಿ ವೈಜ್ಞಾನಿಕ ಕ್ರಮಗಳ ಮೂಲಕ ವಾರ್ಷಿಕ 600 ಕೋಟಿ ರೂ. ಲಾಭ ತರುವ ವ್ಯವಸ್ಥೆ ಜಾರಿಗೆ ತರಲು ಸಾಧ್ಯವಿದೆ. ಹೀಗಾಗಿ ರಾಜ್ಯದಲ್ಲಿ ವಿದ್ಯುತ್ ಕಂಪನಿಗಳ ನಷ್ಟ ಭರಿಸಲು ಸಾರ್ವಜನಿಕರ ಮೇಲೆ ಹೊರೆ ಹೇರುವ ವಿದ್ಯುತ್ ದರ ಏರಿಕೆ ಪ್ರಸ್ತಾಪದ ಹುನ್ನಾರದಿಂದ ಹಿಂದೆ ಸರಿಯಬೇಕು ಎಂದು ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಸಮಾಜ ಸೇವಾ ಸಮಿತಿ ಸರ್ಕಾರವನ್ನು ಆಗ್ರಹಿಸಿದೆ.

ಈ ಕುರಿತು ಜಿಲ್ಲಾಡಳಿತ ಮೂಲಕ ಕರ್ನಾಟಕ ವಿದ್ಯುತ್ಚಕ್ತಿ ನಿಯಂತ್ರಣ ಆಯೋಗದ ಅಧ್ಯಕ್ಷರು, ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಇಂಧನ ಸಚಿವರಿಗೆ, ಬೃಹತ್ ಕೈಗಾರಿಕಾ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಿಗೆ, ಹಾಗೂ ವಿರೋಧ ಪಕ್ಷದ ನಾಯಕ–ರಿಗೆ ಪತ್ರ ಬರೆದಿರುವ ಸಂಘಟನೆ ಅಧ್ಯಕ್ಷ ಮಲ್ಲಿಕಾರ್ಜುನ ಕೆಂಗನಾಳ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿ, ವಿದ್ಯುತ್ ದರ ಏರಿಕೆ ಕುರಿತು ಪ್ರಸ್ತಾಪಕ್ಕೆ ವಿರೋಧ ವ್ಯಕ್ತಪಡಿಸಿದರು.

ಸರ್ಕಾರ ಹಾಗೂ ವಿದ್ಯುತ್ಚಕ್ತಿ ಆಯೋಗ ವಿದ್ಯುತ್ ದರ ಏರಿಕೆ ಪ್ರಸ್ತಾಪದ ಬದಲು, ಕಂಪನಿಗಳಲ್ಲಿ ನಡೆಯುತ್ತಿರುವ ಅವೈಜ್ಞಾನಿಕ ಕ್ರಮಗಳು ಹಾಗೂ ಸೋರಿಕೆ ತಡೆಗೆ ಮುಂದಾಗಬೇಕು. ಇದರಿಂದ ವಿದ್ಯುತ್ ಕಂಪನಿಗಳು ನಷ್ಟದ ಬದಲು ವಾರ್ಷಿಕ 600 ಕೋಟಿ ರೂ. ಲಾಭ ತರಲು ಸಾಧ್ಯವಿದೆ. ಹೀಗಾಗಿ ದರ ಏರಿಕೆ ಪ್ರಸ್ತಾಪ ಕೈ ಬಿಡುವಂತೆ ಆಗ್ರಹಿಸಿದರು.

ಸುಮಾರು 10 ವರ್ಷಗಳಿಂದ ಕೆ.ಪಿ.ಟಿ.ಸಿ.ಎಲ್. ಹಾಗೂ ಹೆಸ್ಕಾಂ ಕಂಪನಿಯ ಚಟುವಟಿಕೆಗಳನ್ನು ಹತ್ತಿರದಿಂದ ಬಲ್ಲವನಾಗಿದ್ದು ಅನಗತ್ಯ ಸೋರಿಕೆಯೇ ಕಂಪನಿಗಳ ಆರ್ಥಿಕ ದುಸ್ಥಿತಿಗೆ ವಾಸ್ತವಿಕ ಕಾರಣ ಎಂದು ದೂರಿದರು. ಈಗ ಇರುವ ವಿದ್ಯುತ್ ದರದಿಂದಲೇ ವಾರ್ಷಿಕ 600 ಕೋಟಿ ರೂ. ಲಾಭತರಲು ಸಾಧ್ಯವಿದೆ. ಒಂದೊಮ್ಮೆ ಸರ್ಕಾರ ನೇರವಾಗಿ ನನಗೆ ಅವಕಾಶ ಕಲ್ಪಿಸಿದಲ್ಲಿ ಕಂಪನಿಗಳ ಆರ್ಥಿಕ ಸಬಲೀಕರಣಕ್ಕಾಗಿ ಲಾಭದಾಯಕ ಯೋಜನೆಗಳನ್ನು ಸರ್ಕಾರದ ಮುಂದೆ ಮಂಡಿಸಲು ಸಿದ್ಧನಿದ್ದೇನೆ ಎಂದು ಸಾಮಾಜಿಕ ಹಾಗೂ ಜನಪರ ಹೋರಾಟಗಾರ ಎಪಿಜೆ ಅಬ್ದುಲ್ ಕಲಾಂ ಸಮಾಜ ಸೇವಾ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಕೆಂಗನಾಳ ಸರ್ಕಾರಕ್ಕೆ ಸವಾಲು ಹಾಕಿದರು.

ಈ ಸಂದರ್ಭದಲ್ಲಿ ಸಂಸ್ಥಾಪಕ ಮಲ್ಲಿಕಾರ್ಜುನ, ಕಾಳಪ್ಪಾ ಕಪಾಳಿ, ಯುವರಾಜ ಚೋಳಕೆ, ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಸಮಾಜ ಸೇವಾ ಸಮಿತಿ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಕನ್ನೂರು, ಉಪಾಧ್ಯಕ್ಷ ನಿಹಾದ್ ಅಹಮದ್ ಗೋಡಿಹಾಳ, ಸಹ ಕಾರ್ಯದರ್ಶಿ ರಮಜಾನ್ ರಜಾಕಸಾಬ್ ಶೇಖ್, ಖಜಾಂಚಿ ಅಮರೇಶ ತಿಲಿಯಾಳ, ಶಶಿಕಾಂತ ಹೂರಾಗರ, ಬಾದಶಾ ಪಠಾಣ ಸೇರಿದಂತೆ ಇತರರು ಉಪಸ್ಥಿತ–ರಿದ್ದರು.

# ವಿಜಯಪುರ ಪೋಲೀಸರ ಸಾಹಸ :ವಂಚನೆ ಜಾಲ ಪತ್ತೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ವಿವಿಧ ಠಾಣೆಗಳಲ್ಲಿ ದಾಖಲಾಗಿದ್ದ ಪ್ರಕರಣಗಳ ಪತ್ತೆ ಕುರಿತಂತೆ ಪೊಲೀಸ್ ವರಿಷ್ಠಾಧಿಕಾರಿ ರಿಷಿಕೇಶ್ ಸೋನವಾಣೆ ಮಾಹಿತಿ ನೀಡಿದರು.

ನಗರದಲ್ಲಿ ಗುರುವಾರ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಜಯಪುರದ ಸಿಈಎನ್ ಪೊಲೀಸ್‌ಠಾಣೆಯಲ್ಲಿ ದಾಖಲಾಗಿದ್ದ ಒಟ್ಟು 12 ಅಪರಾಧ ಪ್ರಕರಣಗಳು ದಾಖಲಾಗಿದ್ದವು. ಇವುಗಳ ಪತ್ತೆಗೆ ವಿಶೇಷ ತಂಡವನ್ನ ರಚಿಸಲಾಗಿತ್ತು. ಈ ಪ್ರಕರಣಗಳಿಗೆ ಸಂಬಂಧಿಸಿದಂತೆ



ರಚಿಸಲಾದ ತಂಡ ಯಶಸ್ವಿ ಪತ್ತೆ ಕಾರ್ಯಾಚರಣೆ ಮಾಡಿದ್ದು, ಒಟ್ಟು ದಾಖಲಾದ 12 ಅಪರಾಧ ಪ್ರಕರಣಗಳಲ್ಲಿ ಒಟ್ಟು ಎರಡು ಕೋಟಿ ಏಳು ಲಕ್ಷದಷ್ಟು ಆರ್ಥಿಕ ವಂಚನೆಯಲ್ಲಿ 1 ಕೋಟಿ 89 ಲಕ್ಷದಷ್ಟು ಮೊತ್ತವನ್ನ ಮರಳಿ ಜಮೆ ಮಾಡಿಸಲಾಗಿದೆ ಎಂದು ಮಾಹಿತಿ ನೀಡಿದರು.

ಇದಲ್ಲದೇ ಜಿಲ್ಲೆಯಲ್ಲಿ ವಿವಿಧ ಪೊಲೀಸ ಠಾಣಾ ವ್ಯಾಪ್ತಿಯಲ್ಲಿ ಕಳ್ಳತನ ಆಗಿದ್ದ ಮೊಬೈಲ್‌ಗಳನ್ನು ಜಪ್ತಿ ಮಾಡಲಾಗಿದೆ ಎಂದು ಎಸ್ಪಿ ಋಷಿಕೇಸ್ ಸೋನವಾಣೆ ಮಾಹಿತಿ ನೀಡಿದರು.

ಜಿಲ್ಲೆಯ ವಿವಿಧ ಠಾಣಾ ವ್ಯಾಪ್ತಿಯಲ್ಲಿ 4,58,500 ರೂಪಾಯಿ ಮೌಲ್ಯದ 25 ವಿವಿಧ ಕಂಪನಿಯ ಮೊಬೈಲ್‌ಗಳನ್ನು ವಶಕ್ಕೆ ಪಡೆಯಲಾಗಿದೆ. ಅಲ್ಲದೇ, ಕಳ್ಳತನವಾದ ಮೊಬೈಲ್‌ಗಳನ್ನು ಸಿಇಐಆರ್ ವೈಬ್ ಸೈಟ್ ಮುಖಾಂತರ ಮೊಬೈಲ್‌ಗಳನ್ನು ಪತ್ತೆ ಮಾಡಲಾಗಿದೆ ಎಂದು ವಿವ–ರಿಸಿದರು.